ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ, ನಾಡಕಛೇರಿ ಗುಡೇಕೋಟೆ

ಸಂ/ಕಂ/ಹ.ಬ./ನಾಕಗು/58/2015-16. ದಿನಾಂಕ:12-07-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಎಂ.ಜೆ.ಶ್ಯಾಮಸುಂದರ್ ನಾಯ್ಕ ತಂದೆ ಎಂ. ಜಗನ್ನನಾಯ್ಕ ಚಿಕ್ಕಜೋಗಿಹಳ್ಳಿ ತಾಂಡ<br>2)ಜಹಿರಾಬೀ ಗಂಡ ಲೇಟ್ ಅಬ್ದುಲ್ ರೌಫ್ ಚಿಕ್ಕಜೋಗಿಹಳ್ಳಿ ಗ್ರಾಮ. ಕೂಡ್ಲಿಗಿ ತಾಲೂಕು | ಜಿನತ್ ತಂದೆ ಕಡಪ ಹುಸೇನ್ ಸಿದ್ದಾಪುರ ಗ್ರಾಮ ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಗುಂಡುಮುಣುಗು ಗ್ರಾಮದ ಸನಂ 637/2. ವಿಸ್ತೀರ್ಣ 3-00 ಎಕ್ರೆ ಜಮೀನನ್ನು ಕ್ರಯ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಗುಂಡುಮುಣುಗು ಗ್ರಾಮದ ಸನಂ 637/2. ವಿಸ್ತೀರ್ಣ 3-00 ಎಕ್ರೆ ಜಮೀನನ್ನು ಸದರಿ ತಾಲೂಕು ಚಿಕ್ಕಜೋಗಿಹಳ್ಳಿ ಗ್ರಾಮದ ಜಹಿರಾಬೀ ಗಂಡ ಲೇಟ್ ಅಬ್ದುಲ್ ರೌಫ್ ಇವರಿಂದ ಸದರಿ ತಾಲೂಕು ಚಿಕ್ಕಜೋಗಿಹಳ್ಳಿ ತಾಂಡದ ಎಂ.ಜೆ.ಶ್ಯಾಮಸುಂದರ್ ನಾಯ್ಕ ತಂದೆ ಎಂ.ಜಗನ್ನನಾಯ್ಕ. ಇವರು ದಿನಾಂಕ 09-12-2015 ರ ಡಾಕ್ಯುಮೆಂಟ್ ನಂಬರ್: 2731/2015-16. ರ ಪ್ರಕಾರ ಖರೀದಿಸಿ ಕೂಡ್ಲಿಗಿಯ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಿಸಿ ಕೊಂಡಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಗುಂಡುಮುಣುಗು ಇವರು ನಮೂನೆ-21 ನೋಟಿಸನ್ನು ದಿನಾಂಕ 10-12-2015. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ತಾಲೂಕು ಸಿದ್ದಾಪುರ ಗ್ರಾಮದ ಜಿನತ್ ತಂದೆ ಕಡಪ ಹುಸೇನ್ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 34/2015-16. ದಿನಾಂಕ 11-01-2016. ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 12-04-2016 ರಿಂದ 12-07-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ತಕರಾರುದಾರರು ಗೈರು ಹಾಜರಾಗಿರುತ್ತಾರೆ. ಅರ್ಜಿದಾರರು ಗುಂಡುಮುಣುಗು ಗ್ರಾಮದ ಸನಂ 637/2. ವಿಸ್ತೀರ್ಣ 3-00 ಎಕ್ರೆ ಜಮೀನನ್ನು ಸದರಿ ತಾಲೂಕು ಚಿಕ್ಕಜೋಗಿಹಳ್ಳಿ ಗ್ರಾಮದ ಜಹೀರಾಬೀ ಗಂಡ ಅಬ್ದುಲ್ ರೌಫ್ ಇವರಿಂದ ದಿನಾಂಕ 09-12-2015 ರ ಡಾಕ್ಯುಮೆಂಟ್ ನಂಬರ್: 2731/2015-16. ರ ಪ್ರಕಾರ ರೂ: 1.65.000/- ಗಳಿಗೆ ಖಂಡಿತ ಕ್ರಯಕ್ಕೆ ಖರೀದಿಸಿ ಕೂಡ್ಲಿಗಿಯ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಿಸಿ ಕೊಂಡಿರುತ್ತೇನೆ. ಕಾರಣ ಸದರಿ ಕ್ರಯ ಪತ್ರ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಗೈರು ಹಾಜರಾಗಿರುತ್ತಾರೆ. ಅವರು ಸದರಿ ವಿವಾದಿತ ಜಮೀನು ತಕರಾರು ಎಂದು ತಿಳಿಸಿದ್ದು ವಿಚಾರಣೆಗೆ ಹಾಜರಾಗಿ ತಮ್ಮ ತಕರಾರು ಬಗ್ಗೆ ಹಾಗೂ ತಮ್ಮ ಹಕ್ಕನ್ನು ಸಾಬೀತು ಪಡಿಸುವ ಬಗ್ಗೆ ಯಾವುದೇ ಹೇಳಿಕೆಗಳನ್ನು ನೀಡಿರುವುದಿಲ್ಲ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರು ಹೇಳಿಕೆಗಳನ್ನು ಕೇಳಿ ತಕರಾರುದಾರರು ತಮ್ಮ ತಕರಾರು ಬಗ್ಗೆ ವಿಚಾರಣೆಗೆ ಹಾಜರಾಗಿ ಯಾವುದೇ ಹೇಳಿಕೆಗಳನ್ನು ನೀಡಿರುವುದಿಲ್ಲ ಗ್ರಾಮಲೆಕ್ಕಿಗರು ತಕರಾರುದಾರರಿಗೆ ನೋಟಿಸ್ಸು ಜಾರಿ ಮಾಡುವಾಗ ತಕರಾರುದಾರರು ಗ್ರಾಮದಲ್ಲಿ ಇರುವುದಿಲ್ಲವೆಂದು ತಿಳಿಸಿರುತ್ತಾರೆ. ಕಾರಣ ಅವರ ತಕರಾರು ಅರ್ಜಿಯನ್ನು ತಳ್ಳಿಹಾಕಿ ಕರ್ನಾಟಕ ಭೂಕಂದಾಯ ಕಾಯ್ದೇ 1964 ರ ಕಲಂ 128 ರ ಅಡಿಯಲ್ಲಿ ಈ ಕೆಳಗಿನಂತೆ ಈ ಆದೇಶ ಮಾಡಲಾಗಿದೆ.

## –:ಆದೇಶ:–

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಗುಂಡುಮುಣುಗು ಗ್ರಾಮದ ಸನಂ 637/2. ವಿಸ್ತೀರ್ಣ 3–00 ಎಕ್ರೆ ಜಮೀನನ್ನು ದಿನಾಂಕ 09–12–2015 ರ ಡಾಕ್ಯುಮೆಂಟ್ ನಂಬರ್: 2731/2015–16 ರ ಕ್ರಯ ದಸ್ತಾವೇಜು ಪ್ರಕಾರ ಅರ್ಜಿದಾರರಾದ ಹಾಗೂ ಕ್ರಯದಾರರಾದ ಎಂ.ಜೆ.ಶ್ಯಾಮಸುಂದರ್ ನಾಯ್ಕ ತಂದೆ ಜಗನ್ಯನಾಯ್ಕ ಚಿಕ್ಕಜೋಗಿಹಳ್ಳಿ ತಾಂಡ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 12–07–2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕ[illegible]ಟೆ
ಕೊಟ್ಟೂರು

ಇದರ ಪ್ರತಿಯನ್ನು:

1) ಅರ್ಜಿದಾರರಾದ ಎಂ.ಜೆ.ಶ್ಯಾಮಸುಂದರ್ ನಾಯ್ಕ ತಂದೆ ಎಂ.ಜಗನ್ಯನಾಯ್ಕ. ಚಿಕ್ಕಜೋಗಿಹಳ್ಳಿ ತಾಂಡ ಜಹೀರಾಬೀ ಗಂಡ ಲೇಟ ಅಬ್ದುಲ್ ರೌಫ್ ಚಿಕ್ಕಜೋಗಿಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಜಿನತ್ ತಂದೆ ಕಡಪ ಹುಸ್ಬೇನ್ ಸಿದ್ದಾಪುರ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.